ಜಿಲ್ಲಾಧಿಕಾರಿ ಹಾಗೂ
ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ
ಉಡುಪಿ ಜಿಲ್ಲೆ, "ರಜತಾದ್ರಿ"
ಮಣಿಪಾಲ, ಉಡುಪಿ – 576104
Email: udupidc@gmail.com
deo.udupi@gmail.com

( ಕಂದಾಯ ಇಲಾಖೆ )

Deputy Commissioner &
District Magistrate's Office,
Udupi District, " Rajatadri",
Manipal, Udupi - 576104
Office: 0820-2574924, 2574925

ನಂ:ಎಂಎಜಿ(2)ಆರ್:51/2020-21:E-54506 ದಿನಾಂಕ:07.08.2021

## ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,ಉಡುಪಿ ಜಿಲ್ಲೆ, ಉಡುಪಿ –ಇವರ ನಡವಳಿ

ವಿಷಯ: ಕೋವಿಡ್ -19 ಹಿನ್ನಲೆಯಲ್ಲಿ ಜಿಲ್ಲೆಯಾದ್ಯಂತ ಮಾರ್ಗಸೂಚಿಗಳನ್ನು ಜಾರಿಗೊಳಿಸುವ ಬಗ್ಗೆ.

ಉಲ್ಲೇಖ: 1.ಸರ್ಕಾರದ ಆದೇಶ ಸಂ: ಆರ್ ಡಿ 158 ಟಿ ಎನ್ ಆರ್ 2020; ದಿನಾಂಕ: 03/07/2021,16.07.2021,18.07.2021,24.07.2021 ಮತ್ತು 30.07.2021
2. ಸರ್ಕಾರದ ಆದೇಶ ಸಂ: ಆರ್ ಡಿ 158 ಟಿ ಎನ್ ಆರ್ 2020; ದಿನಾಂಕ: 31-07-2021
3. ಸರ್ಕಾರದ ಆದೇಶ ಸಂ: ಆರ್ ಡಿ 158 ಟಿ ಎನ್ ಆರ್ 2020; ದಿನಾಂಕ: 06-08-2021
4. ಈ ಕಛೇರಿಯ ಸಮ ಸಂಖ್ಯೆಯ ಆದೇಶ ದಿನಾಂಕ:02.08.2021

*****

ಕೋವಿಡ್ -19 ಸಾಂಕ್ರಾಮಿಕ ರೋಗದ ಹರಡುವಿಕೆಯನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಸರ್ಕಾರದ ಉಲ್ಲೇಖ(2)ರ ಆದೇಶವನ್ನು ಆಧರಿಸಿ, ದಿನಾಂಕ: 02-08-2021 ರಿಂದ ಮುಂದಿನ ಆದೇಶದ ವರೆಗೆ ಉಡುಪಿ ಜಿಲ್ಲೆಯಾದ್ಯಂತ ಕೆಲವು ಮಾರ್ಗಸೂಚಿ/ನಿಬಂಧನೆಗಳನ್ನು ವಿಧಿಸಿ ನಿಯಂತ್ರಣ ಕ್ರಮಗಳನ್ನು ಉಲ್ಲೇಖ (4)ರಲ್ಲಿ ಜ್ಯಾರಿಗೊಳಿಸಲಾಗಿರುತ್ತದೆ.

ದಿನಾಂಕ: 06-08-2021 ರಂದು ಮಾನ್ಯ ಮುಖ್ಯಮಂತ್ರಿಯವರು ಕೋವಿಡ್ 19 ಪರಿಸ್ಥಿತಿಯ ಕುರಿತಾಗಿ ರಾಜ್ಯದ ಅಧಿಕಾರಿಗಳು ಮತ್ತು ಆರೋಗ್ಯ ತಜ್ಞರೊಂದಿಗೆ ನಡೆಸಿದ ಸಭೆಯಲ್ಲಿ ಕೋವಿಡ್ ನಿಯಂತ್ರಣಕ್ಕಾಗಿ ಹೆಚ್ಚುವರಿ ಕ್ರಮಗಳನ್ನು ವಹಿಸಲು ತಜ್ಞರ ಸಭೆಯು ಶಿಫಾರಸ್ಸು ಮಾಡಿದ ಹಿನ್ನಲೆಯಲ್ಲಿ ಮೇಲ್ಕಂಡ(3)ರ ಉಲ್ಲೇಖದಂತೆ ಸರಕಾರವು ಹೆಚ್ಚುವರಿ ಕ್ರಮ/ ನಿರ್ಬಂಧಗಳನ್ನು ಹೇರಿ ಆದೇಶಿಸಿದೆ.

ಮುಂದುವರಿದು ಮುಂಬರುವ ದಿನಗಳಲ್ಲಿ ನಡೆಯಲಿರುವ ಹಬ್ಬಗಳು ಮತ್ತು ಜನದಟ್ಟಣೆಯ ವಸ್ತು ಸ್ಥಿತಿಯನ್ನು ಅವಲೋಕಿಸಿ ಜಿಲ್ಲಾಧಿಕಾರಿಗಳು ಹೆಚ್ಚುವರಿ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲು ಸರ್ಕಾರದಿಂದ ನಿರ್ದೇಶನ ನೀಡಲಾಗಿರುತ್ತದೆ.

ಆದ್ದರಿಂದ ಸರ್ಕಾರದ ಉಲ್ಲೇಖ(3) ರ ಆದೇಶ ಹಾಗೂ ಜಿಲ್ಲೆಯ ಪ್ರಸ್ತುತ ವಿದ್ಯಮಾನಗಳನ್ನು ಪರಿಗಣಿಸಿ, ಸಾರ್ವಜನಿಕರ ಆರೋಗ್ಯದ ಹಿತ ದೃಷ್ಟಿಯಿಂದ ಜಿ. ಜಗದೀಶ ,ಭಾ.ಆ.ಸೇ .ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ಉಡುಪಿ ಜಿಲ್ಲೆ, ಉಡುಪಿ ಆದ ನಾನು ಸಿ.ಆರ್.ಪಿ.ಸಿ. ಸೆಕ್ಷನ್ 144(3) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ **ದಿನಾಂಕ :07.08.2021 ರಿಂದ ಮುಂದಿನ ಆದೇಶದವರಗೆ ಈ ಕೆಳಗಿನಂತೆ ಪರಿಷ್ಕೃತ ಆದೇಶ ಹೊರಡಿಸುತ್ತೇನೆ.**

## ಆದೇಶ

A) ಜಿಲ್ಲೆಯಾದ್ಯಂತ ರಾತ್ರಿ 9.00 ಗಂಟೆಯಿಂದ ಬೆಳಿಗ್ಗೆ 5.00 ಗಂಟೆಯ ವರೆಗೆ ಅನುಬಂಧ- A ರಲ್ಲಿನ ಮಾರ್ಗಸೂಚಿಗಳಂತೆ ಕಟ್ಟುನಿಟ್ಟಿನ ರಾತ್ರಿ ಕರ್ಫ್ಯೂ ಜಾರಿಯಲ್ಲಿರುತ್ತದೆ.

B) ಈ ಕೆಳಗಿನ ಚಟುವಟಿಕೆಗಳನ್ನು ಹೊರತುಪಡಿಸಿ ಉಳಿದ ಎಲ್ಲ ಚಟುವಟಿಕೆಗಳನ್ನು ಕಂಟೈನ್ಮೆಂಟ್ ವ್ಯಾಪ್ತಿಯ ಹೊರಗಡೆ ಜಿಲ್ಲೆಯಾದ್ಯಂತ ಅನುಮತಿಸಲಾಗಿದೆ.

1. ಪಬ್ ಗಳಿಗೆ ಅನುಮತಿ ಇರುವುದಿಲ್ಲ.
2. ಕೋವಿಡ್-19 ಸೂಕ್ತ ನಡವಳಿಕೆಯನ್ನು ಹಾಗೂ ಸಂಬಂಧಪಟ್ಟ ಇಲಾಖೆಯವರು ಹೊರಡಿಸುವ ಕೋವಿಡ್-19 ಪ್ರಮಾಣಿತ ಕಾರ್ಯವಿಧಾನವನ್ನು (SOP) ಅನುಸರಿಸುವ ಷರತ್ತುಗಳೊಂದಿಗೆ ಸ್ಪರ್ಧಾತ್ಮಕ ತರಬೇತಿಗಳಿಗೆ ಮಾತ್ರ ಈಜು ಕೊಳಗಳನ್ನು ತೆರೆಯಲು ಅನುಮತಿಸಿದೆ.
3. ಕೋವಿಡ್-19 ಸೂಕ್ತ ಶಿಷ್ಟಾಚಾರವನ್ನು ಅನುಸರಿಸುವ ಷರತ್ತುಗಳೊಂದಿಗೆ ಕ್ರೀಡಾಪಟುಗಳ ಅಭ್ಯಾಸಕ್ಕೆ ಮಾತ್ರ ಕ್ರೀಡಾ ಸಂಕೀರ್ಣಗಳನ್ನು/ ಸ್ಟೇಡಿಯಂಗಳನ್ನು ತೆರೆಯಲು ಅನುಮತಿಸಿದೆ. ಆದರೆ ಪ್ರೇಕ್ಷಕರಿಗೆ ಅನುಮತಿ ಇರುವುದಿಲ್ಲ.
4. ಎಲ್ಲಾ ಸಾಮಾಜಿಕ, ರಾಜಕೀಯ, ಕ್ರೀಡೆ, ಮನರಂಜನಾ, ಶೈಕ್ಷಣಿಕ, ಸಾಂಸ್ಕೃತಿಕ, ಧಾರ್ಮಿಕ ಮತ್ತು ಇತರೆ ಸಭೆಗಳು ಹಾಗೂ ಸಮಾರಂಭಗಳು ಮತ್ತು ಸಾರ್ವಜನಿಕರು ಒಟ್ಟುಗೂಡುವುದನ್ನು ನಿರ್ಬಂಧಿಸಲಾಗಿದೆ.
5. ಕೋವಿಡ್-19 ಪ್ರಮಾಣಿತ ಕಾರ್ಯವಿಧಾನವನ್ನು (SOP) ಅನುಸರಿಸುವ ಷರತ್ತುಗಳೊಂದಿಗೆ ಮದುವೆ/ ಕೌಟುಂಬಿಕ ಶುಭ ಸಮಾರಂಭಗಳಿಗೆ ಸರ್ಕಾರದ ಹಿಂದಿನ ಮಾರ್ಗಸೂಚಿಯಂತೆ ಈ ಕೆಳಗೆ ನಿಗದಿಪಡಿಸಿದ ಷರತ್ತಿಗೊಳಪಟ್ಟು 100 ಜನರಿಗೆ ಮೀರದಂತೆ ನಡೆಸಲು ಅನುಮತಿಸಲಾಗಿದೆ.

- ಮದುವೆ/ ಕೌಟುಂಬಿಕ ಶುಭ ಸಮಾರಂಭಗಳನ್ನು ಆಯೋಜಿಸುವವರು ಆಮಂತ್ರಣ ಪತ್ರ ಅಥವಾ ಇತರ ಯಾವುದೇ ಸಂಬಂಧಿತ ದಾಖಲೆಗಳೊಂದಿಗೆ ಸಹಿ ಮಾಡಿದ ಅರ್ಜಿಯನ್ನು ಸಂಬಂಧಪಟ್ಟ ತಹಶೀಲ್ದಾರ್ ಅವರಿಗೆ ಸಲ್ಲಿಸಬೇಕು.
- ಅರ್ಜಿಯ ಸ್ವೀಕೃತಿಯ ಮೇರೆಗೆ, ತಹಶೀಲ್ದಾರರು ಪ್ರತಿ ಮದುವೆ/ ಕೌಟುಂಬಿಕ ಶುಭ ಸಮಾರಂಭ ಕಾರ್ಯಕ್ರಮಕ್ಕೆ 100 ಪಾಸ್‌ಗಳನ್ನು ನೀಡಬೇಕು
- ಪಾಸ್ ಹೊಂದಿರುವ ಜನರಿಗೆ ಮಾತ್ರ ಮದುವೆ/ ಕೌಟುಂಬಿಕ ಶುಭ ಸಮಾರಂಭ ಕಾರ್ಯಕ್ಕೆ ಹಾಜರಾಗಲು ಅವಕಾಶವಿರುತ್ತದೆ ಮತ್ತು ಪಾಸ್ ಅನ್ನು ವರ್ಗಾಯಿಸಲು ಅವಕಾಶವಿರುವುದಿಲ್ಲ.

- ಮದುವೆ/ ಕೌಟುಂಬಿಕ ಶುಭ ಸಮಾರಂಭ ಕಾರ್ಯಕ್ಕೆ ಹಾಜರಾಗುವ ಜನರು ಕೋವಿಡ್ ಸಮುಚಿತ ವರ್ತನೆಯನ್ನು (COVID APPROPRIATE BEHAVIOUR –CAB) ಕಟ್ಟುನಿಟ್ಟಾಗಿ ಪಾಲಿಸುವುದು ಮತ್ತು ಅವರ ಪಾಸ್‌ಗಳನ್ನು ಅಧಿಕೃತ ಪರಿಶೀಲನಾ ಅಧಿಕಾರಿಗಳಿಗೆ ತೋರಿಸುವುದು.

➢ ಕೋವಿಡ್-19 ಸೂಕ್ತ ನಡವಳಿಕೆಯಂತೆ ಅಂತ್ಯ ಸಂಸ್ಕಾರಕ್ಕೆ 20 ಜನಕ್ಕೆ ಮೀರದಂತೆ ನಡೆಸಲು ಅನುಮತಿಸಲಾಗಿದೆ.

6. ಪೂಜಾ ಸ್ಥಳಗಳಾದ ದೇವಾಲಯಗಳು, ಮಸೀದಿಗಳು, ಚರ್ಚುಗಳು, ಗುರುದ್ವಾರಗಳು ಮತ್ತು ಇತರ ಧಾರ್ಮಿಕ ಸ್ಥಳಗಳನ್ನು ತೆರೆಯಲು ಅನುಮತಿಸಲಾಗಿದೆ. ಕೋವಿಡ್ ಸಮುಚಿತ ವರ್ತನೆಗಳನ್ನು ಪಾಲಿಸುದರೊಂದಿಗೆ ಮತ್ತು ಸಂಬಂಧಪಟ್ಟ ಇಲಾಖೆಯಿಂದ ಹೊರಡಿಸಲಾದ SOP ಯನ್ನು ಕಟ್ಟುನಿಟ್ಟಾಗಿ ಪಾಲಿಸುವ ಷರತ್ತಗೊಳಪಟ್ಟು ಪೂಜಾ ಸ್ಥಳಗಳಿಗೆ ಸಂಬಂಧಿಸಿದ ಚಟುವಟಿಕೆಗಳನ್ನು ನಡೆಸಲು ಅನುಮತಿಸಿದೆ. ಆದರೆ ಸದರಿ ಧಾರ್ಮಿಕ ಸ್ಥಳಗಳಲ್ಲಿ ಜಾತ್ರೆಗಳು, ದೇವಾಲಯ ಉತ್ಸವಗಳು/ಹಬ್ಬಗಳು ,ಮೆರವಣಿಗೆಗಳು ಮತ್ತು ಒಟ್ಟುಗೂಡುವುದನ್ನು ನಿರ್ಬಂಧಿಸಲಾಗಿದೆ.

7. ಕೋವಿಡ್-19 ಸೂಕ್ತ ನಡವಳಿಕೆಯಂತೆ ಶೇ. 100 ರಷ್ಟು ಆಸನ ಸಾಮರ್ಥ್ಯದವರೆಗೆ ಸಾರ್ವಜನಿಕ ಸಾರಿಗೆಗಳಿಗೆ ಅನುಮತಿಸಲಾಗಿದೆ.(Only for seating Capacity of Public Transport )

8. ಎಲ್ಲಾ ಅಂಗಡಿಗಳು, ರೆಸ್ಟೋರೆಂಟ್ ಗಳು, ಮಾಲ್ ಗಳು, ಖಾಸಗಿ ಕಚೇರಿಗಳು ಮತ್ತು ಮುಚ್ಚಿದ (Closed Places) ಸ್ಥಳಗಳಲ್ಲಿ, ಕೋವಿಡ್-19 ಸೂಕ್ತ ನಡವಳಿಕೆಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವುದು ತಪ್ಪಿದಲ್ಲಿ ವಿಪತ್ತು ನಿರ್ವಹಣಾ ಕಾಯ್ದೆ 2005ರನ್ವಯ ಕ್ರಮ ಕೈಕೊಳ್ಳಲಾಗುವುದು.

9. ಸಿನೆಮಾ ಹಾಲ್‌ಗಳು / ಮಲ್ಟಿಪ್ಲೆಕ್ಸ್‌ಗಳು / ಚಿತ್ರಮಂದಿರಗಳು / ರಂಗಮಂದಿರಗಳು / ಸಭಾಂಗಣಗಳು ಮತ್ತು ಅಂತಹದೇ ರೀತಿಯ ಸ್ಥಳಗಳಲ್ಲಿ ಶೇ. 50 ರಷ್ಟು ಆಸನ ಸಾಮರ್ಥ್ಯದೊಂದಿಗೆ COVID ಸೂಕ್ತ ನಡವಳಿಕೆ ಮತ್ತು ಸಂಬಂಧಪಟ್ಟ ಇಲಾಖೆಗಳು ನೀಡುವ SOP ಗಳನ್ನು ಕಟ್ಟುನಿಟ್ಟಾಗಿ ಅನುಸರಿಸುವ ಷರತ್ತುಗಳೊಂದಿಗೆ ಕಾರ್ಯನಿರ್ವಹಿಸಲು ಅನುಮತಿಯನ್ನು ನೀಡಲಾಗಿದೆ.

10. ಉನ್ನತ ಶಿಕ್ಷಣ ಇಲಾಖೆಗೆ ಸೇರಿದ ಕಾಲೇಜುಗಳು ಮತ್ತು ಸಂಸ್ಥೆಗಳನ್ನು COVID ಸೂಕ್ತ ನಡವಳಿಕೆ **ಮತ್ತು ಸಂಬಂಧಪಟ್ಟ ಇಲಾಖೆಗಳು ನೀಡುವ SOP ಗಳನ್ನು ಕಟ್ಟುನಿಟ್ಟಾಗಿ** ಅನುಸರಿಸುವ ಷರತ್ತುಗಳೊಂದಿಗೆ **ತೆರೆಯಲು** ಅನುಮತಿಸಲಾಗಿದೆ. ವಿದ್ಯಾರ್ಥಿಗಳು, ಬೋಧನೆ ಮತ್ತು ಬೋಧಕೇತರ / ಇತರ ಸಿಬ್ಬಂದಿಗಳಿಗೆ COVID-19 ಲಸಿಕೆಯ ಕನಿಷ್ಠ ಒಂದು ಡೋಸ್ ಲಸಿಕೆಯನ್ನು ತೆಗೆದುಕೊಂಡು ಮಾತ್ರ ಕಾಲೇಜುಗಳು / ಸಂಸ್ಥೆಗಳಿಗೆ ಹಾಜರಾಗಲು ಅನುಮತಿಸಲಾಗಿದೆ. ವಿದ್ಯಾರ್ಥಿಗಳ ಹಾಜರಾತಿ ಐಚ್ಛಿಕವಾಗಿರುತ್ತದೆ.

11. ದೀರ್ಘಾವಧಿಯ ತಾಂತ್ರಿಕ ಕೋರ್ಸ್‌ಗಳನ್ನು ಒಳಗೊಂಡಂತೆ ಎಲ್ಲಾ ಕೌಶಲ್ಯ ಅಭಿವೃದ್ಧಿ ತರಬೇತಿಗಳಿಗೆ COVID ಸೂಕ್ತ ನಡವಳಿಕೆಗಳನ್ನು ಕಟ್ಟುನಿಟ್ಟಾಗಿ ಅನುಸರಿಸುವ ಷರತ್ತುಗಳೊಂದಿಗೆ ಕಾರ್ಯನಿರ್ವಹಿಸಲು ಅನುಮತಿಯನ್ನು ನೀಡಲಾಗಿದೆ. ವಿದ್ಯಾರ್ಥಿಗಳು, ಬೋಧನೆ ಮತ್ತು ಬೋಧಕೇತರ / ಇತರ ಸಿಬ್ಬಂದಿಗಳಿಗೆ COVID-19 ಲಸಿಕೆಯ ಕನಿಷ್ಠ ಒಂದು ಡೋಸ್ ಲಸಿಕೆಯನ್ನು ತೆಗೆದುಕೊಂಡು ಮಾತ್ರ ಸಂಸ್ಥೆಗಳಿಗೆ ಹಾಜರಾಗಲು ಅನುಮತಿಸಲಾಗಿದೆ.

12. ಉನ್ನತ ಶಿಕ್ಷಣ ಇಲಾಖೆಗೆ ಸೇರಿದ ಕಾಲೇಜುಗಳನ್ನು ಮತ್ತು ಶಿಕ್ಷಣ ಸಂಸ್ಥೆಗಳನ್ನು ಹೊರತುಪಡಿಸಿ ಇತರ ಶೈಕ್ಷಣಿಕ ಸಂಸ್ಥೆಗಳು/ ಟುಟೋರಿಯಲ್ಸ್/ ಕಾಲೇಜುಗಳು ಮುಂದಿನ ಆದೇಶದವರೆ ಮುಚ್ಚಲ್ಪಟಿರುತ್ತವೆ.

13. ಆರೋಗ್ಯ ಮತ್ತು ವೈದ್ಯಕೀಯ ಕ್ಷೇತ್ರಕ್ಕೆ ಸಂಬಂಧಿಸಿದ ವೈದ್ಯಕೀಯ ಸಂಸ್ಥೆಗಳ ಪುನರಾರಂಭ (ವೈದ್ಯಕೀಯ / ದಂತ ಕಾಲೇಜುಗಳು, ಆಯುಷ್ ಗೆ ಸಂಬಂಧಿಸಿದ ಕಾಲೇಜುಗಳು ಮತ್ತು ಸಂಸ್ಥೆಗಳು , ನರ್ಸಿಂಗ್ ಕಾಲೇಜುಗಳು ಮತ್ತು ಇತರ ಅಲೈಡ್ ಹೆಲ್ತ್ ಕೇರ್ ಶೈಕ್ಷಣಿಕ ಸಂಸ್ಥೆಗಳು / ಕಾಲೇಜುಗಳು) COVID ಸೂಕ್ತ ನಡವಳಿಕೆ ಮತ್ತು ಸಂಬಂಧಪಟ್ಟ ಇಲಾಖೆಗಳು ನೀಡುವ SOP ಗಳನ್ನು ಕಟ್ಟುನಿಟ್ಟಾಗಿ ಅನುಸರಿಸುವ ಷರತ್ತುಗಳೊಂದಿಗೆ ತೆರೆಯಲು ಅನುಮತಿಸಲಾಗಿದೆ. ವಿದ್ಯಾರ್ಥಿಗಳು, ಬೋಧನೆ ಮತ್ತು ಬೋಧಕೇತರ / ಇತರ ಸಿಬ್ಬಂದಿಗಳಿಗೆ COVID-19 ಲಸಿಕೆಯ ಕನಿಷ್ಠ ಒಂದು ಡೋಸ್ ಲಸಿಕೆಯನ್ನು ತೆಗೆದುಕೊಂಡು ಮಾತ್ರ ಕಾಲೇಜುಗಳು / ಸಂಸ್ಥೆಗಳಿಗೆ ಹಾಜರಾಗಲು ಅನುಮತಿಸಲಾಗಿದೆ.

14. ಕೋವಿಡ್ ಸಮುಚಿತ ವರ್ತನೆಗಳೊಂದಿಗೆ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ದಿನಾಂಕ: 12-11-2020 ರಂದು ಹೊರಡಿಸಲಾದ ಸುತ್ತೋಲೆಯಲ್ಲಿರುವ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಿಕೊಂಡು " ಅಮ್ಯೂಸ್ ಮೆಂಟ್ ಪಾರ್ಕ್ ಮತ್ತು ಅಂತಹ ಇತರ ಸ್ಥಳಗಳನ್ನು ತೆರೆಯಲು ಅನುಮತಿ ನೀಡಲಾಗಿದೆ. ಈ ಪೈಕಿ ಜಲ ಕ್ರೀಡೆ/ಜಲ ಸಂಬಂಧಿತ ಸಾಹಸ ಚಟುವಟಿಕೆ (water sports/water related adventure activities) ಗಳಿಗೆ ಅನುಮತಿ ಇರುವುದಿಲ್ಲ.

**C) ಕೋವಿಡ್ ಸಮುಚಿತ ವರ್ತನೆ**

✓ COVID-19 ಸೂಕ್ತ ನಡವಳಿಕೆಯನ್ನು ಕಡ್ಡಾಯವಾಗಿ ಪಾಲಿಸಲು ಮುಖಗವಸುಗಳನ್ನು ಧರಿಸುವುದು, ಕೈಗಳ ನೈರ್ಮಲ್ಯ ಮತ್ತು ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವುದನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವುದನ್ನು ಖಚಿತಪಡಿಸಿಕೊಳ್ಳುವುದು.

✓ ಮಾಸ್ಕ್ ಧರಿಸುವುದು, ಸೋಂಕು ಹರಡುವಿಕೆಯನ್ನು ನಿಯಂತ್ರಿಸಲು ಅತ್ಯವಶ್ಯಕ ಕ್ರಮವಾಗಿದ್ದು, ಮುಖಗವಸುಗಳನ್ನು ಧರಿಸದ ವ್ಯಕ್ತಿಗಳ ವಿರುದ್ಧ ಮಹಾ ನಗರ ಪಾಲಿಕೆ ಪ್ರದೇಶಗಳಲ್ಲಿ ರೂ. 250/- ಮತ್ತು ಇನ್ನಿತರ ಪ್ರದೇಶಗಳಲ್ಲಿ ರೂ.100/- ದಂಡ ವಿಧಿಸಲಾಗುವುದು.

✓ ಕೋವಿಡ್ ನಿರ್ವಹಣೆಗಾಗಿ ರಾಷ್ಟ್ರೀಯ ನಿರ್ದೇಶನಗಳನ್ನು ಜಿಲ್ಲೆಯಾದ್ಯಂತ ಕಟ್ಟುನಿಟ್ಟಾಗಿ ಪಾಲಿಸುವುದು.

ಮೇಲಿನ ಆದೇಶಗಳನ್ನು ಪಾಲಿಸದೇ ಇದ್ದವರ ಮೇಲೆ ಪೋಲಿಸ್ ಠಾಣೆಗಳಲ್ಲಿ ಕ್ರಿಮಿನಲ್ ಪ್ರಕರಣಗಳನ್ನು, Disaster Management Act 2005 , Karnataka Epidemic Diseases act 2020 ಮತ್ತು IPC ಸೆಕ್ಷನ್ 188 ಪ್ರಕಾರ ನಿಯಮಾನುಸಾರ ಕಠಿಣ ಕ್ರಮಕೈಗೊಳ್ಳಲಾಗುವುದು. ಈ ಆದೇಶವು ಸರಕಾರದಿಂದ ನಡೆಸಲ್ಪಡುವ ಯಾವುದೇ ಕಾರ್ಯಕ್ರಮ, ಸಭೆಗಳಿಗೆ ಅನ್ವಯಿಸುವುದಿಲ್ಲ. ಈ ಆದೇಶವನ್ನು ದಿನಾಂಕ:07.08.2021 ರಂದು ನನ್ನ ಸ್ವಹಸ್ತಾಕ್ಷರ ಮತ್ತು ಮುದ್ರೆಯೊಂದಿಗೆ ಹೊರಡಿಸಲಾಗಿದೆ.

DISTRICT MAGISTRATE, UDUPI DIST. UDUPI. ಜಿಲ್ಲಾ ದಂಡಾಧಿಕಾರಿ, ಉಡುಪಿ ಜಿಲ್ಲೆ, ಉಡುಪಿ

ಜಿ. ಜಗದೀಶ ,ಭಾ.ಆ.ಸೇ
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ಉಡುಪಿ ಜಿಲ್ಲೆ,ಉಡುಪಿ

## ಅನುಬಂಧ-ಎ

ನೈಟ್ ಕರ್ಫ್ಯೂ ಗೆ ಮಾರ್ಗಸೂಚಿಗಳು :

1) ರಾತ್ರಿ 9.00 ರಿಂದ ಪೂರ್ವಾಹ್ನ 05.00 ರ ನಡುವೆ ಅಗತ್ಯ ಚಟುವಟಿಕೆಗಳಿಗೆ ಹೊರತುಪಡಿಸಿ ಜನರ ಓಡಾಟಗಳನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.
2) ರೋಗಿಗಳು ಮತ್ತು ಅವರೊಂದಿಗಿರುವ ಪರಿಚಾರಕರು - ತುರ್ತು ಅಗತ್ಯತೆಗಾಗಿ ವ್ಯಕ್ತಿಗಳನ್ನು ಸ್ಥಳಾಂತರಿಸಲು ಅನುಮತಿಸಿದೆ.
3) ರಾತ್ರಿ ಪಾಳಿಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಕೈಗಾರಿಕೆಗಳು / ಕಂಪನಿಗಳಿಗೆ, ರಾತ್ರಿ ಸಮಯದಲ್ಲಿ ಕಾರ್ಯಾಚರಿಸಲು ಅನುಮತಿಯನ್ನು ನೀಡಲಾಗಿದೆ. ಹಾಗೂ ಅಂತಹ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುವ ನೌಕರರ, ಸಂಸ್ಥೆಯಿಂದ ನೀಡಲಾದ ಸೂಕ್ತ ಗುರುತಿನ ಚೀಟಿ / ಅನುಮತಿಗೆ ಸಂಬಂಧಿಸಿದ ದಾಖಲೆಯನ್ನು ಸಲ್ಲಿಸುವ ಮೂಲಕ ಸಂಚಾರಿಸಬಹುದಾಗಿದೆ.
4) ದೂರವಾಣಿ ಹಾಗೂ ಅಂತರ್ಜಾಲ ಸೇವೆಯನ್ನು ಒದಗಿಸುವ ನೌಕರರು ಹಾಗೂ ವಾಹನಗಳನ್ನು ತಮ್ಮ ಸಂಸ್ಥೆಯಿಂದ ಪಡೆದಿರುವ ಸೂಕ್ತ ಗುರುತಿನ ಚೀಟಿಯನ್ನು ಸಲ್ಲಿಸಿ ಸಂಚಾರಿಸಬಹುದಾಗಿದೆ. ಮಾಹಿತಿ ತಂತ್ರಜ್ಞಾನ ಮತ್ತು ಮಾಹಿತಿ ತಂತ್ರಜ್ಞಾನ ಆಧಾರಿತ ಕಂಪನೆ / ಸಂಸ್ಥೆ ( IT and ITeS companies /organization) ಗಳಲ್ಲಿ ಕಾರ್ಯ ನಿರ್ವಹಿಸುವ ಅಗತ್ಯ ಸಿಬ್ಬಂದಿ ಹಾಗೂ ಕಾರ್ಮಿಕರನ್ನು ಹೊರತುಪಡಿಸಿ ಇತರೆ ಸಿಬ್ಬಂದಿ ಹಾಗೂ ಕೆಲಸಗಾರರು ಮನೆಗಳಲ್ಲಿಯೇ ಕಾರ್ಯನಿರ್ವಹಿಸುವುದು (work from home)
5) ವೈದ್ಯಕೀಯ, ತುರ್ತು ಹಾಗೂ ಔಷಧಾಲಯಗಳನ್ನು ಒಳಗೊಂಡ ಅವಶ್ಯಕ ಸೇವೆಗಳು ಯಥಾ ರೀತಿಯಲ್ಲಿ ಸರಕಾರದ ನಿಯಮಗಳೊಂದಿಗೆ ಕಾರ್ಯನಿರ್ವಹಿಸವುದು. ಹಾಗೂ ಇತರೆ ವಾಣಿಜ್ಯ ಚಟುವಟಿಕೆಗಳನ್ನು ನಿಷೇಧಿಸಿದೆ.
6) ಎಲ್ಲಾ ತರಹದ ಟ್ರಕ್ ಗಳಲ್ಲಿ ಸಾಗಿಸುವ ಸರಕಗಳು, ಸರಕು ವಾಹನ ಅಥವಾ ಇತರೆ ಸರಕು ಸಾಗಾಟ ವಾಹನಗಳು , ಖಾಲಿ ವಾಹನಗಳನ್ನು ಒಳಗೊಂಡು ಓಡಾಟಕ್ಕೆ ಅವಕಾಶ ನೀಡಲಾಗಿದೆ. ಇ-ಕಾಮರ್ಸ್ ಕಂಪನಿಗಳು ಹಾಗೂ ಹೋಮ್ ಡೆಲಿವರಿ ಕೆಲಸವನ್ನು ಮುಂದುವರೆಸಲು ಅನುಮತಿಸಿದೆ.
7) ಬಸ್ ಸೇವೆಗಳು, ರೈಲುಗಳು ಮತ್ತು ವಿಮಾನ ಪ್ರಯಾಣವನ್ನು ಅನುಮತಿಸಲಾಗಿದೆ .ವಿಮಾನ ನಿಲ್ದಾಣಕ್ಕೆ, ರೈಲ್ವೆ ನಿಲ್ದಾಣಕ್ಕೆ ,ಬಸ್ ನಿಲ್ದಾಣಕ್ಕೆ ಹಾಗೂ ವಿಮಾನ ನಿಲ್ದಾಣಗಳಿಂದ, , ರೈಲ್ವೆ ನಿಲ್ದಾಣಗಳಿಂದ , ಬಸ್ ನಿಲ್ದಾಣಗಳಿಂದ ಹೊರಡುವ ಸಾರ್ವಜನಿಕ ಸಾರಿಗೆ ವಾಹನಗಳು, ಖಾಸಗಿ ವಾಹನಗಳು ಮತ್ತು ಟ್ಯಾಕ್ಸಿಗಳ ಓಡಾಟವನ್ನು ಅನುಮತಿಸಿದೆ. ಪ್ರಯಾಣ ಮಾಡುವ ಸಂಧರ್ಭದಲ್ಲಿ ಪ್ರಯಾಣಿಕರು ಸೂಕ್ತ ಪ್ರಯಾಣದ ದಾಖಲೆಗಳು / ಟಿಕೆಟುಗಳನ್ನು ಸಲ್ಲಿಸುವುದು ಕಡ್ಡಾಯವಾಗಿದೆ.

ಜಿ. ಜಗದೀಶ ,ಭಾ.ಆ.ಸೇ
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ಉಡುಪಿ ಜಿಲ್ಲೆ,ಉಡುಪಿ

ಪ್ರತಿಯನ್ನು ಈ ಕೆಳಕಂಡ ಅಧಿಕಾರಿಗಳಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸುತ್ತಾ ಉಲ್ಲೇಖಿತ ಸರ್ಕಾರದ ಆದೇಶ ಹಾಗೂ ಈ ಆದೇಶವನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲು ತಿಳಿಸಿದೆ.

1) ಮುಖ್ಯ ಕಾರ್ಯನಿರ್ವಹಣಾಧಿಕಾರಿ , ಉಡುಪಿ ಜಿಲ್ಲಾ ಪಂಚಾಯತ್ , ಉಡುಪಿ
2) ಪೋಲಿಸ್ ಅಧೀಕ್ಷಕರು ಉಡುಪಿ ಜಿಲ್ಲೆ ಉಡುಪಿ
3) ಉಪ ಅರಣ್ಯ ಸಂರಕ್ಷಣಾಧಿಕಾರಿ ಕುಂದಾಪುರ –ವಿಭಾಗ ಕುಂದಾಪುರ
4) ಸಹಾಯಕ ಕಮೀಷನರ್, ಕುಂದಾಪುರ ಉಪವಿಭಾಗ ಕುಂದಾಪುರ
5) ಯೋಜನಾ ನಿರ್ದೇಶಕರು , ಜಿಲ್ಲಾ ನಗರಾಭಿವೃದ್ಧಿ ಕೋಶ ಉಡುಪಿ ಜಿಲ್ಲೆ
6) ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ,ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ,ಉಡುಪಿ
7) ಜಿಲ್ಲಾ ಶಸ್ತ್ರಚಿಕಿತ್ಸಕರು, ಜಿಲ್ಲಾ ಆಸ್ಪತ್ರೆ, ಉಡುಪಿ
8) ಸಹಾಯಕ ಪೊಲೀಸ್ ಅದೀಕ್ಷಕರು ಕುಂದಾಪುರ

9) ಪೊಲೀಸ್ ಉಪಾಧೀಕ್ಷಕರು ಉಡುಪಿ/ ಕಾರ್ಕಳ
10) ಅಧಿಕ್ಷಕ ಇಂಜಿನೀಯರ್ ಮೆಸ್ಕಾಂ ಉಡುಪಿ ಜಿಲ್ಲೆ
11) ಡೆಪ್ಯೂಟಿ ಕಮೀಷನರ್ ಅಬಕಾರಿ ಇಲಾಖೆ ಉಡುಪಿ
12) ಜಂಟಿ ನಿರ್ದೇಶಕರು ಕೈಗಾರಿಕಾ ಇಲಾಖೆ,ಉಡುಪಿ
13) ಜಂಟಿ ನಿರ್ದೇಶಕರು ಕೃಷಿ ಇಲಾಖೆ,ಉಡುಪಿ
14) ತಹಶೀಲ್ದಾರರು ಉಡುಪಿ/ಕುಂದಾಪುರ/ಕಾರ್ಕಳ/ಬೈಂದೂರು/ಬ್ರಹ್ಮಾವರ/ಕಾಪು/ಹೆಬ್ರಿ
15) ಸಹಾಯಕ ಆಯುಕ್ತರು, ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆ ಉಡುಪಿ
16) ಉಪ ನಿರ್ದೇಶಕರು , ಸಾರ್ವಜನಿಕ ಶಿಕ್ಷಣ ಇಲಾಖೆ, ಉಡುಪಿ ಜಿಲ್ಲೆ ,ಉಡುಪಿ
17) ಉಪ ನಿರ್ದೇಶಕರು , ಪದವಿ ಪೂರ್ವ ಶಿಕ್ಷಣ ಇಲಾಖೆ , ಉಡುಪಿ ಜಿಲ್ಲೆ ,ಉಡುಪಿ
18) ಜಿಲ್ಲಾ ವಕ್ಫ್ ಅಧಿಕಾರಿ , ಉಡುಪಿ ಜಿಲ್ಲೆ, ಉಡುಪಿ
19) ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ರಜತಾದ್ರಿ, ಮಣಿಪಾಲ
20) ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ .
21) ಜಿಲ್ಲಾ ಕಾರ್ಮಿಕ ಅಧಿಕಾರಿ ಕಾರ್ಮಿಕ ಇಲಾಖೆ ರಜತಾದ್ರಿ, ಮಣಿಪಾಲ.
22) ಅಂಕಿತ ಅಧಿಕಾರಿಗಳು , ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ , ಉಡುಪಿ ಜಿಲ್ಲೆ
23) ಸಹಾಯಕ ನಿರ್ದೇಶಕರು , ಪ್ರವಾಸೋದ್ಯಮ ಇಲಾಖೆ, ಉಡುಪಿ ಜಿಲ್ಲೆ ,ಉಡುಪಿ
24) ಕಾರ್ಯನಿರ್ವಾಹಣಾಧಿಕಾರಿ ತಾಲೂಕು ಪಂಚಾಯತ್ ಉಡುಪಿ /ಕುಂದಾಪುರ /ಕಾರ್ಕಳ /ಬೈಂದೂರು /ಬ್ರಹ್ಮಾವರ/ಕಾಪು/ಹೆಬ್ರಿ
25) ಪೌರಾಯುಕ್ತರು, ಉಡುಪಿ ನಗರಸಭೆ
26) ಮುಖ್ಯಾಧಿಕಾರಿ, ಪುರಸಭೆ ಕುಂದಾಪುರ/ಕಾರ್ಕಳ/ಕಾಪು ಮತ್ತು ಬೈಂದೂರು ಮತ್ತು ಸಾಲಿಗ್ರಾಮ ಪಟ್ಟಣ ಪಂಚಾಯತ್
27) ಪ್ರಾದೇಶಿಕ ಸಾರಿಗೆ ಅಧಿಕಾರಿ ಉಡುಪಿ ಜಿಲ್ಲೆ
28) ವಿಭಾಗೀಯ ನಿಯಂತ್ರಣಾಧಿಕಾರಿ ಕೆ.ಎಸ್. ಆರ್ .ಟಿ.ಸಿ ಮಂಗಳೂರು
29) ಉಪನಿರ್ದೇಶಕರು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಡುಪಿ
30) ಆಯುಕ್ತರು ನಗರಾಭಿವೃದ್ಧಿ ಪ್ರಾಧಿಕಾರ ಉಡುಪಿ ಜಿಲ್ಲೆ
31) ಸಹಾಯಕ ನಿರ್ದೇಶಕರು ಯುವಜನಸೇವೆ ಮತ್ತು ಕ್ರೀಡಾ ಇಲಾಖೆ ಉಡುಪಿ
32) ಉಪನಿರ್ದೇಶಕರು, ಮೀನುಗಾರಿಕೆ ಇಲಾಖೆ ಉಡುಪಿ . ಮಲ್ಪೆ
33) ಹಿರಿಯ ಸಹಾಯಕ ನಿರ್ದೇಶಕರು ಮೀನುಗಾರಿಕಾ ಇಲಾಖೆ ಬನ್ನಂಜೆ ಉಡುಪಿ
34) ಮುಖ್ಯ ಗ್ರಂಥಾಲಯ ಅಧಿಕಾರಿ ಜಿಲ್ಲಾ ಗ್ರಂಥಾಲಯ, ಉಡುಪಿ
35) ಕಾರ್ಯದರ್ಶಿಗಳು, ಎ.ಪಿ.ಎಂ.ಸಿ ಕುಂದಾಪುರ ,/ ಕಾರ್ಕಳ / ಉಡುಪಿ
36) ತಾಲೂಕು ಆರೋಗ್ಯಾಧಿಕಾರಿ, ಉಡುಪಿ/ ಕುಂದಾಪುರ/ ಕಾರ್ಕಳ
37) ಜಿಲ್ಲೆಯ ಎಲ್ಲಾ ದೇವಾಲಯಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
38) ಸಹಾಯಕ ನಿರ್ದೇಶಕರು ಜಿಲ್ಲಾ ವಾರ್ತಾ ಮತ್ತು ಸಂಪರ್ಕ ಇಲಾಖೆ, ಉಡುಪಿ ಜಿಲ್ಲೆ ಉಡುಪಿ- ಈ ಅಧಿಸೂಚನೆಯನ್ನು ಜಿಲ್ಲೆಯ ವಾರ್ತಾ ಮಾಧ್ಯಮಗಳಲ್ಲಿ ಪ್ರಚಾರ ಮಾಡುವಂತೆ ಕೋರಿದೆ.

## GOVERNMENT OF KARNATAKA

No. RD 158 TNR 2020

Karnataka Government Secretariat,
MS Building,
Bengaluru, Dated: 06-08-2021

# ORDER

## Containment measures to prevent spread of COVID 19

**Read**

1 Guidelines for surveillance, containment and caution issued vide order of even number dated 03-07-2021

2 Order of even number dated 16-07-2021 reg. reopening of Medical colleges and allied institutions

3 Extension of guidelines for surveillance, containment and caution and additional activities issued vide order of even number dated 18-07-2021

4 Order of even number dated 24-07-2021 reg. functioning of places of worship

5 Order of even number dated 30-07-2021 reg. empowering Chief Commissioner-BBMP and DCs to impose additional containment measures as deemed necessary.

6 Order of even number dated 31-07-2021 reg. extension of existing guidelines upto 16-08-2021

7 Ministry of Health and Family Welfare, Govt. of India, letter No.04/COVID/fest/AS(H)/2021, dated 04-08-2021- reg. preventing crowding and gathering during the upcoming festival season

****

**Whereas,** the Hon'ble Chief Minister on 06-08-2021 reviewed the COVID 19 situation in the State with the concerned Officers and Health Experts. It was suggested by the Health Experts that additional containment measures needs to be imposed in light of up-coming festival season to prevent the spread of COVID 19.

**Now, therefore,** in exercise of the powers conferred under the Sub Section (l) of Section 24 of the Disaster Management Act, 2005, the Chairman, State Executive Committee, directs Chief Commissioner BBMP, Police Commissioners, Deputy Commissioners, Superintendents of Police of the districts, and other Authorities to

take following additional containment measures in view of the upcoming festival season which will come into effect from 07-08-2021 and will be in force until 16-08-2021.

i. Night curfew will continue to be imposed from **9 pm to 5 am** in the State as per the guidelines issued vide Order read at No.1.
ii. There shall be **weekend curfew** in the districts bordering Maharashtra (Belagavi, Bidar, Vijayapura and Kalaburagi districts) and Kerala (Dakshina Kannada, Kodagu, Mysuru and Chamarajanagara districts) from Friday 9 pm to Monday 5 am as per the guidelines annexed as **Annexure A.**
iii. As per Sub Clause (iv) of Clause 1 of guidelines read at Serial No.1. All social/political/sports/entertainment/academic/cultural/religious functions/other gatherings and large congregations **are prohibited.** However, Marriages/Family functions are permitted to be conducted involving not more 100 people strictly adhering to COVID 19 appropriate behaviour. Cremation/funerals allowed with maximum of 20 people. Functioning of academic institutions permitted as per orders Read at Serial No.2 and 3.
iv. As read in the order referred at serial No.4. Places of worship (Temples, Mosques, Churches, Gurudwaras, and other religious places) are allowed to open and related activities pertaining to the places of worship permitted strictly adhering to COVID appropriate behaviour. **However, jathres, temple festivals, procession, and congregations not allowed.**
v. As read in Order referred in Serial No. 6, the Chief Commissioner-BBMP, Deputy Commissioners of the districts may consider imposition of local restrictions in public observation of these festivals and curb mass gathering as deemed necessary.

The Chief Commissioner BBMP, Police Commissioners, Deputy Commissioners, and Superintendents of Police in their jurisdiction shall enforce the above guidelines strictly and take action against any person violating these measures under the relevant provisions of Section 51 to 60 of Disaster Management Act, 2005, besides legal action under Section 188 of the IPC, and other legal provisions as applicable.

(Tushar Giri Nath, IAS)
Principal Secretary to Govt., Revenue
Department (DM) and Member Secretary,
State Executive Committee

To:
The Compiler, Karnataka Gazette, Bengaluru

**Annexure-A**

## Guidelines for weekend curfew

Movement of individuals shall remain strictly prohibited between Friday 9 pm to Monday 5 am, except for essential and emergency activities as mentioned below:

1. All State and Central Government offices and their Autonomous Bodies, Corporations, etc, dealing with emergency, essential services and COVID 19 containment and management duties shall be fully functional and officers/personnel of the same shall be allowed unrestricted movement.
2. All Industries/Companies/Organizations dealing with emergency and essential services and requiring operations 24/7 shall be permitted to operate. Movement of employees of such organizations shall be allowed on producing valid ID card issued by their respective Organization/Institution. However, to the extent possible, employees should be encouraged to work from home.
3. Employees and vehicles of Telecom and Internet Service providers shall be allowed movement on producing valid ID card issued by their respective organization/institution. Only essential staff/employees of of IT and ITeS companies /organization shall work from office. Rest will work from home.
4. Patients and their attendants/persons requiring emergency need, eligible people intending to take vaccination shall be allowed movement with minimal proof.
5. Shops dealing with food, groceries, fruits and vegetables, meat and fish, dairy and milk booths, and animal fodder shall be allowed to function from 5 am to 2 pm. Street vendors allowed to function from 5 am to 2 pm. Public Distribution System shops are allowed from 5 am to 2 pm. Standalone liquor shops and outlets, take away only, allowed from 5 am to 2 pm. Home delivery of all items shall be encouraged 24x7 to minimize movement of individuals outside their homes. Operations shall be subject to adhering to National Directives for COVID 19 management.
6. Restaurant and eateries shall be allowed only for take away and home delivery.
7. Movement of trains and air travel are permitted. Movement of Public Transport, private vehicles and taxis to and from airports, railway stations and bus terminals/stops/stands is allowed for facilitating movement of passengers by air, rail and road. The movement will be allowed only on displaying valid travel documents/tickets and strictly adhering to COVID appropriate behavior.

8. Marriages/Family functions are permitted to be conducted involving not more 100 people strictly adhering to COVID 19 appropriate behaviour.
9. Cremation/funerals to be allowed strictly adhering to COVID 19 appropriate with maximum of 20 people.

(Tushar Giri Nath, IAS)
Principal Secretary to Govt., Revenue
Department (DM) and Member Secretary,
State Executive Committee